ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 778(878)
ಸದಸ್ಯರ ಹೆಸರು : ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 20/09/2021.
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ **"ಆರೋಗ್ಯ ವಿಮಾ ಯೋಜನೆ"** ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಇದರಿಂದಾಗಿ ಬೋಧಕ/ಬೋಧಕೇತರರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಇ)	ಸದರಿಯವರಿಗೂ **"ಆರೋಗ್ಯ ಸಂಜೀವಿನಿ ಯೋಜನೆ"**ಯನ್ನು ವಿಸ್ತರಿಸದಿರಲು ಕಾರಣಗಳೇನು; (ಮಾಹಿತಿ ನೀಡುವುದು)	ಸರ್ಕಾರಿ ನೌಕರರಿಗೆ ಚಿಕಿತ್ಸೆ ಪಡೆದ ನಂತರ ಸದರಿ ಮೊತ್ತವನ್ನು ನಿಯಮಾನುಸಾರ ಪರಿಶೀಲಿಸಿ ಹಿಂಬರಿಸಲಾಗುತ್ತಿತ್ತು. ಪ್ರಸ್ತುತ ಜ್ಯೋತಿ ಸಂಜೀವಿನಿ ಯೋಜನೆಯಡಿ ನಗದು ರಹಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಆದರೆ ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ. ಮುಂದುವರೆದು, ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ.
ಈ)	ಯಾವ ಕಾಲಮಿತಿಯಲ್ಲಿ **"ಆರೋಗ್ಯ ಸಂಜೀವಿನಿ ಯೋಜನೆ"**ಯನ್ನು ಕಲ್ಪಿಸಲಾಗುವುದು?	

ಸಂಖ್ಯೆ: ಇಪಿ 327 ಎಸ್‌ಇಎಸ್ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು